ಶ್ರೀ ಆರ್. ರೋಷನ್ ಬೇಗ್ (ಪ್ರವಾಸೋದ್ಯಮ ಹಾಗೂ ಹಜ್ ಸಚಿವರು) :

1. ಶಿವಮೊಗ್ಗದಲ್ಲಿ ಪ್ರವಾಸಿ ಮಾಹಿತಿ ಕೇಂದ್ರ ಇದೆ.

ರಾಜ್ಯದಲ್ಲಿನ ಅರಣ್ಯ ಪ್ರದೇಶದಲ್ಲಿ ಒತ್ತುವರಿ ಮಾಡಿರುವುದು

4946 - ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ರೈತರು ಅರಣ್ಯ ಪ್ರದೇಶದಲ್ಲಿ ಎಷ್ಟು ಎಕರೆ ಜಮೀನನ್ನು ಒತ್ತುವರಿ ಮಾಡಲಾಗಿದೆ? ಅದನ್ನು ಸಿಂಧು ಮಾಡಲು ಸಾಧ್ಯವಿಲ್ಲವೇ?

ಆ) ಮಲೆನಾಡು ಪ್ರದೇಶದಲ್ಲಿ ರೈತರು ಕಾಫಿ ತೋಟಕ್ಕೆ ಅರಣ್ಯ ಪ್ರದೇಶದಲ್ಲಿ ಎಷ್ಟು ಎಕರೆ ಒತ್ತುವರಿ ಮಾಡಲಾಗಿದೆ?

ಇ) ಇದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಕೆ.ಹೆಚ್. ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) 2,69,346 ಎಕರೆ (1,09,047 ಹೆಕ್ಟೇರ್)

ಕೇಂದ್ರ ಸರ್ಕಾರವು 19348 ಕುಟುಂಬಗಳು 27.4.1978ಕ್ಕೆ ಮುಂಚೆ ಮಾಡಿರುವ 14,848.83 ಹೆಕ್ಟೇರು ಅರ್ಹ ಅತಿಕ್ರಮಣಗಳನ್ನು ಸಕ್ರಮ ಮಾಡಲು ಅನುಮೋದನೆ ನೀಡಿದೆ. ಇದರಂತೆ ರಾಜ್ಯ ಸರ್ಕಾರವು ಹೊರಡಿಸಿರುವ ಆದೇಶ ಸಂಖ್ಯೆ : ಅಪಜೀ 5 ಎಫ್‌ಜಿಎಲ್ 90, ದಿನಾಂಕ 5.5.97ರಲ್ಲಿ ನಮೂದಿಸಿರುವ ಕೆಲವೊಂದು ಷರತ್ತುಗಳಿಗೆ ಒಳಪಟ್ಟು ಸಕ್ರಮಗೊಳಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಉಳಿದ ಎಲ್ಲಾ ಅತಿಕ್ರಮಣಗಳನ್ನು ಖಿಲ್ಲಾಪಡಿಸಲು ಕೇಂದ್ರ ಸರ್ಕಾರವು ಆದೇಶಿಸಿದೆ.

ಆ) 22032 ಎಕರೆ (8920 ಹೆಕ್ಟೇರ್).

ಇ) ಅನರ್ಹ ಅತಿಕ್ರಮಣಗಳನ್ನು ತೆರವುಗೊಳಿಸಲು ಕರ್ನಾಟಕ ಅರಣ್ಯ ಕಾಯ್ದೆ 1963ರ ಸೆಕ್ಷನ್ 64(ಎ) ಪ್ರಕಾರ ಕ್ರಮವನ್ನು ತೆಗೆದುಕೊಳ್ಳಲಾಗುತ್ತಿದೆ.

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಪಶುವೈದ್ಯಕೀಯ ಸೇವಾ ಸೌಲಭ್ಯ

4947 - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಚಾಮುಂಡೇಶ್ವರಿ ಕ್ಷೇತ್ರದ ಗ್ರಾಮೀಣ ಪ್ರದೇಶದಲ್ಲಿ ಎಷ್ಟು ಪಶು ಚಿಕಿತ್ಸಾಲಯಗಳಿವೆ?

2. ಈ ಪಶು ಚಿಕಿತ್ಸಾಲಯಗಳನ್ನು ಪಶು ವೈದ್ಯಕೀಯ ಆಸ್ಪತ್ರೆಗೆ ಏರಿಸುವ ತೀರ್ಮಾನವನ್ನು ಸರ್ಕಾರ ಕೈಗೊಂಡಿದೆಯೆ?

3. *ಮೈಸೂರು ತಾಲ್ಲೂಕಿನಲ್ಲಿ ಜಾನುವಾರು ಸಂಖ್ಯೆಗೆ ಅನುಗುಣವಾಗಿ ಪಶು ಚಿಕಿತ್ಸಾಲಯಗಳು ಇವೆಯೇ?*

4. *ಹಾಗಿಲ್ಲದಿದ್ದಲ್ಲಿ ಅಗತ್ಯ ಸೌಲಭ್ಯ ಒದಗಿಸಲು ಕೈಗೊಂಡಿರುವ ಕ್ರಮ ಏನು?*

ಶ್ರೀ ಎ. ಕೃಷ್ಣಪ್ಪ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು) :

1. 17.

2. ಇಲ್ಲ.

3. ಇವೆ.

4. ಉದ್ಭವಿಸುವುದಿಲ್ಲ.

ಮೈಸೂರು ಜಿಲ್ಲೆಯ ಉದ್ಯೋಗ ಮತ್ತು ತರಬೇತಿ ಇಲಾಖೆ ಕಾರ್ಯನಿರ್ವಹಣೆ

4949 - ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮೈಸೂರು ಜಿಲ್ಲೆಯ ವ್ಯಾಪ್ತಿಗೆ ಸೇರಿದ ಉದ್ಯೋಗ ವಿನಿಮಯ ಕಛೇರಿಯಲ್ಲಿ ಕಳೆದ 2 ವರ್ಷಗಳಲ್ಲಿ ನೊಂದಾಯಿಸಿರುವ ಅಭ್ಯರ್ಥಿಗಳ ಸಂಖ್ಯೆ ಎಷ್ಟು? ನೊಂದಾಯಿತ ಎಷ್ಟು ಜನರಿಗೆ ನೌಕರಿ ಒದಗಿಸಲಾಗಿದೆ?*

ಆ) *ಉದ್ಯೋಗ ವಿನಿಮಯ ಕೇಂದ್ರದಲ್ಲಿ ಸಲಹಾ ಕೇಂದ್ರ ಅಥವಾ ಮನೋ ವೈಜ್ಞಾನಿಕ ಬ್ಯೂರೋ ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದೆಯೇ?*

ಇ) *ಇತ್ತೀಚೆಗೆ ನೊಂದಾವಣೆ ಇಲಾಖೆಯಲ್ಲಿ ವೈಜ್ಞಾನಿಕ ತಾಂತ್ರಿಕತೆಯನ್ನು ಅಳವಡಿಸುವ ಉದ್ದೇಶವನ್ನು ಹೊಂದಿದೆಯೇ?*

ಶ್ರೀ ಎ.ಎಂ. ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು) :

ಅ) 29,557 ಅಭ್ಯರ್ಥಿಗಳು. 3,229 ಅಭ್ಯರ್ಥಿಗಳಿಗೆ ಉದ್ಯೋಗ ಒದಗಿಸಲಾಗಿದೆ.

ಆ) ಇಲ್ಲ. ಆದರೆ, ಬಹುತೇಕ ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ಈಗಾಗಲೇ ವೃತ್ತಿ ಮಾರ್ಗದರ್ಶನ ಘಟಕಗಳು ಕಾರ್ಯ ನಿರ್ವಹಿಸುತ್ತಲಿವೆ. ಉದ್ಯೋಗಾಕಾಂಕ್ಷಿಗಳು ಹಾಗೂ ವಿದ್ಯಾರ್ಥಿಗಳಿಗೆ ಉದ್ಯೋಗ/ಸ್ವಯಂ ಉದ್ಯೋಗ/ತರಬೇತಿ ಅವಕಾಶಗಳ ಬಗ್ಗೆ ಅವಶ್ಯ ಮಾಹಿತಿ/ ಮಾರ್ಗದರ್ಶನ ನೀಡಿ ಅವರ ಭವಿಷ್ಯ ರೂಪಿಸುವುದರಲ್ಲಿ ಸದರಿ ಘಟಕಗಳು ನೆರವಾಗುತ್ತಿವೆ.

ಇ) ಉದ್ಯೋಗ ವಿನಿಮಯ ಕೇಂದ್ರಗಳನ್ನು ಹಂತ-ಹಂತದಲ್ಲಿ ಗಣಕೀಕರಿಸಲಾಗಿ ನೊಂದಣಿ, ಮಾಹಿತಿ ವಿತರಣೆ ಇತ್ಯಾದಿ ದಿನನಿತ್ಯದ ಕೆಲಸ ಕಾರ್ಯಗಳನ್ನು ಗಣಕೀಕರಿಸು ಮೂಲಕ ವೈಜ್ಞಾನಿಕ ತಾಂತ್ರಿಕತೆಯನ್ನು ಅಳವಡಿಸಲು ಉದ್ದೇಶಿಸಿದೆ.